ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 7/4/21

# ಹಣ ದುರ್ಬಳಕೆ: ಸಮಗ್ರ ವರದಿಗೆ ಪಿಎಸಿ ಸೂಚನೆ

ಬೆಂಗಳೂರು: ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಇಲಾಖೆಯಲ್ಲಿ ಸರ್ಕಾರಿ ಪ್ರೌಢ ಶಾಲೆಗಳ ವಿದ್ಯಾರ್ಥಿಗಳಿಗೆ ಕಂಪ್ಯೂಟರ್ ಶಿಕ್ಷಣ ಯೋಜನೆ ಜಾರಿಯಲ್ಲಿ ಅಕ್ರಮ, ಸರ್ಕಾರಿ ಮುದ್ರಣಾಲಯ-ದಲ್ಲಿ ಸಾಮಗ್ರಿ ಖರೀದಿಯಲ್ಲಿ ಲೋಪ ಮತ್ತು ಅಂಗವಿಕಲ ವಿದ್ಯಾರ್ಥಿಗಳಿಗೆ ನೆರವು ನೀಡುವ ಯೋಜನೆಯಲ್ಲಿ ಹಣ ದುರ್ಬಳಕೆ ಕುರಿತಂತೆ ಮಂಗಳವಾರ ನಡೆದ ಸಾರ್ವಜನಿಕ ಲೆಕ್ಕಪತ್ರ ಸಮಿತಿ (ಪಿಎಸಿ) ಸಭೆಯಲ್ಲಿ ಚರ್ಚೆ ನಡೆದಿದೆ.

ಸಮಿತಿಯ ಅಧ್ಯಕ್ಷರಾದ ರಾಮಲಿಂಗಾರೆಡ್ಡಿ ಅನುಪಸ್ಥಿತಿಯಲ್ಲಿ ಎ.ಟಿ. ರಾಮಸ್ವಾಮಿ ಅಧ್ಯಕ್ಷತೆಯಲ್ಲಿ ಸಭೆ ನಡೆಯಿತು. ಸಿಎಜಿ ವರದಿ ಹಾಗೂ ಆರ್ಥಿಕ ಇಲಾಖೆಗೆ ಸಂಬಂಧಪಟ್ಟ ಧನವಿನಿಯೋಗ ಲೆಕ್ಕದಲ್ಲಿ ಆರ್ಥಿಕ ಮಿತಿಗಳ ಪರಿಷ್ಕರಣೆ ಪ್ರಸ್ತಾವನೆ ಕುರಿತು ಸಭೆಯಲ್ಲಿ ಚರ್ಚೆ ನಡೆದಿದೆ.

2010ರಲ್ಲಿ ಕೇಂದ್ರ ಸರ್ಕಾರದ ಯೋಜನೆಯಡಿ ಸರ್ಕಾರಿ ಪ್ರೌಢ ಶಾಲೆಯ ವಿದ್ಯಾರ್ಥಿಗಳ ಕಂಪ್ಯೂಟರ್ ಶಿಕ್ಷಣಕ್ಕೆ ₹ 426 ಕೋಟಿ ಮೊತ್ತದಲ್ಲಿ ಪರಿಕರಗಳನ್ನು ಖರೀದಿಸಲಾಗಿತ್ತು. ಆದರೆ, ಈ ಬಗ್ಗೆ ಯೋಜನಾ ವಿವರ ಇರಲಿಲ್ಲ. ಕೆಲವು ಪರಿಕರ, ಸಾಫ್ಟ್‌ವೇರ್ ನೀಡಿ ಹಾಡ್‌ವೇರ್ ಪೂರೈಸದ ಕಾರಣ ಯೋಜನೆಯ ಉದ್ದೇಶ ಈಡೇರಿಲ್ಲ. ಇದರಲ್ಲಿ ಅವ್ಯವಹಾರ ನಡೆದಿರುವ ಆರೋಪವಿದೆ. ಕಿಯೋನಿಕ್ಸ್ ಸಂಸ್ಥೆ ನೀಡಿದ ತಪ್ಪು ಮಾಹಿತಿಯಿಂದ ಹಣ ದುರ್ಬಳಕೆ ಆಗಿರುವ ಬಗ್ಗೆಯೂ ಚರ್ಚೆ ನಡೆದು, 15 ದಿನಗಳಲ್ಲಿ ಸಮಗ್ರ ವರದಿ ಸಲ್ಲಿಸಲು ಸಮಿತಿ ಸೂಚಿಸಿದೆ ಎಂದು ಮೂಲಗಳು ಹೇಳಿವೆ.

ಸರ್ಕಾರಿ ಮುದ್ರಣಾಲಯದಲ್ಲಿ 2008ರಲ್ಲಿ ₹ 82.34 ಲಕ್ಷ ನಿಷ್ಫಲವಾಗಿತ್ತು ಎಂದು ಸಿಎಜಿ ವರದಿ ಆಕ್ಷೇಪಿಸಿತ್ತು. ತಪ್ಪಿತಸ್ಥ 19 ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವುದಾಗಿ ಇಲಾಖೆ ಪ್ರಧಾನ ಕಾರ್ಯದರ್ಶಿ ವರದಿ ನೀಡಿದ್ದರು. ಆದರೆ, ಸೋಮವಾರ (ಏ. 5) ಈ ಅಧಿಕಾರಿಗಳನ್ನು ಆರೋಪ ಮುಕ್ತಗೊಳಿಸಿ ಸರ್ಕಾರ ಆದೇಶ ಹೊರಡಿಸಿದೆ. ಸಮಿತಿಯ ಮುಂದೆ ಈ ವಿಷಯ ಚರ್ಚೆಯಲ್ಲಿರುವಾಗಲೇ ಆರೋಪಕ್ಕೆ ಗುರಿಯಾದ ಅಧಿಕಾರಿಗಳನ್ನು ಆರೋಪ ಮುಕ್ತಗೊಳಿಸಿರುವ ಬಗ್ಗೆ ಚರ್ಚೆ ನಡೆದಿದ್ದು, ಪ್ರಕರಣ ಸಂಬಂಧ ನಡೆದಿರುವ ಬೆಳವಣಿಗೆಗಳ ಕುರಿತು ವರದಿ ಸಲ್ಲಿಸಲು ಸಭೆಯಲ್ಲಿ ಸೂಚಿಸಲಾಯಿತು.

ಅಂಗವಿಕಲ ವಿದ್ಯಾರ್ಥಿಗಳಿಗೆ ನೆರವು ನೀಡಲು ಕೇಂದ್ರ ಸರ್ಕಾರ ಜಾರಿಗೊಳಿಸಿದ್ದ ಯೋಜನೆಯಲ್ಲಿ ಅಸ್ತಿತ್ವದಲ್ಲೇ ಇಲ್ಲದ ಸ್ವಯಂಸೇವಾ ಸಂಸ್ಥೆಗಳಿಗೆ ಹಣ ಬಿಡುಗಡೆ ಮಾಡಲಾಗಿತ್ತು. ಈ ಪ್ರಕರಣದಲ್ಲಿ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸುವ ಬಗ್ಗೆಯೂ ಸಭೆಯಲ್ಲಿ ಚರ್ಚೆ ನಡೆಯಿತು ಎಂದೂ ತಿಳಿದುಬಂದಿದೆ.